ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

9

ಶಾಖೆ / ವಿಷಯ : DEPARTMENT / SUBJECT: ಶಾಸಕರು/ಸ.೧೯ (MLA-MLC)

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE: 7/7/2020

# ಶಾಸಕ ಪ್ರಾಣೇಶ್, ರಂಗನಾಥ್, ಎಂಪಿ ಸುಮಲತಾಗೆ ಸೋಂಕು

## ಮತ್ತೆ ಮೂವರು ಜನಪ್ರತಿನಿಧಿಗಳಿಗೆ ಕೊರೋನಾ

## ಡಿಕೆಶಿ ಪದಗ್ರಹಣದಲ್ಲಿ ಸಕ್ರಿಯರಾಗಿದ್ದ ರಂಗನಾಥ್

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದಲ್ಲಿ ವ್ಯಾಪಕವಾಗಿ ಹಬ್ಬುತ್ತಿರುವ ಕೊರೋನಾ ಸೋಂಕು ಇದೀಗ ಜನಪ್ರತಿನಿಧಿಗಳಿಗೂ ತಗಲುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿದ್ದು, ಸೋಮವಾರ ಮತ್ತೆ ಒಬ್ಬರು ಸಂಸದೆ ಮತ್ತು ಇಬ್ಬರು ಶಾಸಕರಿಗೆ ಸೋಂಕು ದೃಢಪಟ್ಟಿದೆ.



ಕಳೆದ ವಾರ ಮಂಡ್ಯ ಜಿಲ್ಲೆಯಲ್ಲಿ ಓಡಾಡಿದ್ದ ಸಂಸದೆ ಸುಮಲತಾ ಅಂಬರೀಷ್, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರ ಪದಗ್ರಹಣ ಕಾರ್ಯಕ್ರಮದಲ್ಲಿ ಸಕ್ರಿಯರಾಗಿ ಕಾಣಿಸಿಕೊಂಡಿದ್ದ ಕುಣಿಗಲ್ ಶಾಸಕ ಡಾ.ಎಚ್.ಡಿ.ರಂಗನಾಥ್ ಮತ್ತು ಬೆಂಗಳೂರಿಗೆ ಆಗಮಿಸಿದ್ದ ವಿಧಾನ ಪರಿಷತ್ ಸದಸ್ಯ ಎಂ.ಕೆ. ಪ್ರಾಣೇಶ್ ಅವರಿಗೂ ಸೋಂಕು ತಗಲಿದ್ದು ಅವರ ಸಂಪರ್ಕಕ್ಕೆ ಬಂದವರನ್ನು ಪತ್ತೆ ಹಚ್ಚಲಾಗುತ್ತಿದೆ.

ಶನಿವಾರವಷ್ಟೇ ಮಂಗಳೂರು ಉತ್ತರ ಶಾಸಕ ಡಾ.ಭರತ್ ಶೆಟ್ಟಿ ಅವರಿಗೆ ಸೋಂಕು ತಗಲಿದ್ದು ದೃಢಪಟ್ಟಿತ್ತು..

➘ 5

# ಶಾಸಕ ಪ್ರಾಣೇಶ್, ರಂಗನಾಥ್, ಸುಮಲತಾಗೆ ಸೋಂಕು

➘ ಮೊದಲ ಪುಟದಿಂದ

ಬಳಿಕ ಭಾನುವಾರ ಮಾಜಿ ಕೇಂದ್ರ ಸಚಿವ ಜನಾರ್ದನ ಪೂಜಾರಿ ದಂಪತಿಗೂ ಕೊರೋನಾ ತಗಲಿರುವ ಬಗ್ಗೆ ಅವರ ಪುತ್ರ ಸ್ಪಷ್ಟಪಡಿಸಿದ್ದರು.

**ಡಿಕೆಶಿ ಪದಗ್ರಹಣದಲ್ಲಿ ಸಕ್ರಿಯ:** ಸೋಮವಾರ ಸೋಂಕು ದೃಢಪಟ್ಟಿರುವ ಶಾಸಕ ಡಾ.ರಂಗನಾಥ್ ಅವರು ಡಿ.ಕೆ.ಶಿವಕುಮಾರ್ ಅವರ ಸಂಬಂಧಿಯೂ ಆಗಿದ್ದು ಜು.2ರಂದು ನಡೆದಿದ್ದ ಕೆಪಿಸಿಸಿ ಪದಗ್ರಹಣ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ತೊಡಗಿಸಿದ್ದರು. ಈ ಕಾರ್ಯಕ್ರಮದಲ್ಲಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ಕೆ.ಸಿ.ವೇಣುಗೋಪಾಲ್ ಅವರಿಂದ ಹಿಡಿದು ಹಿರಿಯ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ, ವೀರಪ್ಪ ಮೊಯ್ಲಿ, ಕೆ.ಎಚ್.ಮುನಿಯಪ್ಪ, ಕೆ.ಆರ್. ರಮೇಶ್‌ಕುಮಾರ್, ದಿನೇಶ್ ಗುಂಡೂರಾವ್, ಸಂಸದ ಡಿ.ಕೆ.ಸುರೇಶ್ ಸೇರಿದಂತೆ ನೂರಾರು ಮಂದಿ ಭಾಗವಹಿಸಿದ್ದರು. ಜೊತೆಗೆ ರಂಗನಾಥ್ ಕುಣಿಗಲ್ ಪಟ್ಟಣದಲ್ಲಿ ಇತ್ತೀಚೆಗೆ ಪೊಲೀಸರೊಂದಿಗೆ ಸಭೆ ನಡೆಸಿದ್ದರು. ಭಾನುವಾರವಷ್ಟೇ ಮುಖ್ಯಪೇದೆಯೊಬ್ಬರಿಗೆ ಕೊರೋನಾ ಸೋಂಕು ದೃಢಪಟ್ಟ ಹಿನ್ನೆಲೆಯಲ್ಲಿ ಪೊಲೀಸ್ ಠಾಣೆಯನ್ನು ಸೀಲ್‌ಡೌನ್ ಮಾಡಲಾಗಿತ್ತು.

**ಸಿಎಂ ಸಭೆಯಲ್ಲಿ ಭಾಗಿ:** ಇದೇ ವೇಳೆ ಸಂಸದೆ ಸುಮಲತಾ ಅವರಿಗೆ ಸೋಂಕು ತಗಲಿರುವ ಬಗ್ಗೆ ಅವರೇ ಸ್ವತಃ ತಮ್ಮ ಅಧಿಕೃತ ಫೇಸ್‌ಬುಕ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ತಲೆನೋವು, ಗಂಟಲುನೋವು ಕಾಣಿಸಿಕೊಂಡಿದ್ದ ಹಿನ್ನೆಲೆಯಲ್ಲಿ ಅವರು ಜು.4ರಂದು ಕೋವಿಡ್ ಪರೀಕ್ಷೆಗೊಳಗಾಗಿದ್ದರು. ಇದೀಗ ಪಾಸಿಟಿವ್ ವರದಿ ಬಂದ ಹಿನ್ನೆಲೆಯಲ್ಲಿ ಅವರೇ ವಿಷಯ ಬಹಿರಂಗಪಡಿಸಿದ್ದು, ನಿರಂತರ ಕ್ಷೇತ್ರ ಕಾರ್ಯದಲ್ಲಿ ತೊಡಗಿದ್ದರಿಂದ ಹಾಗೂ ಕೊರೋನಾ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿದ್ದರಿಂದ ಸೋಂಕು ತಗಲಿರಬಹುದು ಎಂದು ಶಂಕೆ ವ್ಯಕ್ತಪಡಿಸಿದ್ದಾರೆ. ಜೂ.29ರಂದು ವಿಧಾನಸಭೆಯಲ್ಲಿ ನಡೆದ ಅಂಬರೀಷ್ ಸ್ಮಾರಕ ಪ್ರತಿಷ್ಠಾನದ ಉನ್ನತ ಮಟ್ಟದ ಸಭೆಯಲ್ಲಿ ಸುಮಲತಾ ಭಾಗವಹಿಸಿದ್ದರು. ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ನೇತೃತ್ವದಲ್ಲಿ ನಡೆದ ಆ ಸಭೆಯಲ್ಲಿ ಚಿತ್ರನಿರ್ಮಾಪಕ ರಾಕ್‌ಲೈನ್ ವೆಂಕಟೇಶ್, ಅಂಬರೀಷ್ ಪುತ್ರ ಅಭಿಷೇಕ್ ಇದ್ದರು. ಅಷ್ಟೇ ಅಲ್ಲದೆ ಕಳೆದ ವಾರ ಸುಮಲತಾ ಪಾಂಡವಪುರ, ನಾಗಮಂಗಲ, ಮಂಡ್ಯ, ಮೇಲುಕೋಟೆ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು.

ವಿಧಾನಪರಿಷತ್ ಸದಸ್ಯ ಎಂ.ಕೆ.ಪ್ರಾಣೇಶ್ ಹಾಗೂ ಅವರ ಪತ್ನಿಗೆ ಕೊರೋನಾ ದೃಢಪಟ್ಟಿರುವ ಬಗ್ಗೆ ಅವರು ಸೋಮವಾರ ಬೆಳಗ್ಗೆಯೇ ಫೇಸ್‌ಬುಕ್‌ನಲ್ಲಿ ಬರೆದಿದ್ದರು. 4 ದಿನಗಳ ಹಿಂದಷ್ಟೇ ಅವರು ಬೆಂಗಳೂರಿನಿಂದ ಮೂಡಿಗೆರೆ ತಾಲೂಕಿನ ಗಟ್ಟದಹಳ್ಳಿಯ ತಮ್ಮ ನಿವಾಸಕ್ಕೆ ವಾಪಸಾಗಿದ್ದರು. ಭಾನುವಾರ ಅವರ ಮತ್ತು ಅವರ ಪತ್ನಿಯ ಆರೋಗ್ಯದಲ್ಲಿ ವ್ಯತ್ಯಾಸ ಕಂಡು ಬಂದಿದ್ದರಿಂದ ಗಂಟಲು ದ್ರವ ಮಾದರಿ ಪರೀಕ್ಷೆ ನಡೆಸಲಾಗಿದ್ದು ಪಾಸಿಟಿವ್ ವರದಿ ಬಂದಿದೆ. ಪ್ರಾಣೇಶ್ ಅವರ 14 ದಿನಗಳ ಕಾಲ ಹಲವು ಸಭೆ, ಸಮಾರಂಭಗಳಲ್ಲಿ ಭಾಗವಹಿಸಿರುವುದು ತಿಳಿದುಬಂದಿದೆ. ಸದ್ಯ ಸಂಪರ್ಕಿತ 35 ಮಂದಿಯನ್ನು ಪತ್ತೆ ಹಚ್ಚಲಾಗಿದ್ದು, ಈ ಸಂಖ್ಯೆ 100ರ ಗಡಿ ದಾಟಲಿದೆ ಎಂದು ಅಂದಾಜಿಸಲಾಗಿದೆ.